**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 29(143)

ಮಾನ್ಯ ಸದಸ್ಯರ ಹೆಸರು: ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ: 15.07.2024.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಶಾಲೆಗಳ ಪೈಕಿ ಎಷ್ಟು ಶಾಲೆಗಳಲ್ಲಿ ಯೋಗ ತರಬೇತಿಯ ತರಗತಿಗಳು ನಡೆಯುತ್ತಿವೆ: | ಪ್ರಸ್ತುತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರು ತಮಗಿರುವ ದೈಹಿಕ ಶಿಕ್ಷಣ ಅವಧಿಯಲ್ಲಿ ಯೋಗ ಶಿಕ್ಷಣವನ್ನು ಬೋಧಿಸುತ್ತಿದ್ದಾರೆ.<br>ಮುಂದುವರೆದು, ಡಿ.ಎಸ್.ಇ.ಆರ್.ಟಿ. ವತಿಯಿಂದ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳು, ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು, ಡಯಟ್‌ಗಳಲ್ಲಿನ ದೈಹಿಕ ಶಿಕ್ಷಣ ಉಪನ್ಯಾಸಕರಿಗೆ ಹಾಗೂ ಶಾಲೆಗಳಲ್ಲಿನ ದೈಹಿಕ ಶಿಕ್ಷಣ ಶಿಕ್ಷಕರಿಗಾಗಿ ದಿನಾಂಕ: 12.06.2024 ರಿಂದ 29.06.2024ರ ವರೆಗೆ 10 ದಿನಗಳ ಆನ್‌ಲೈನ್ ಯೋಗ ತರಬೇತಿ ನೀಡಲಾಗಿರುತ್ತದೆ. |
| ಆ) | ಇಲಾಖೆಯಲ್ಲಿ ಯೋಗ ತರಬೇತಿದಾರರನ್ನು ನೇಮಿಸಿಕೊಳ್ಳಲಾಗಿದೆಯೇ: ಹಾಗಿದ್ದಲ್ಲಿ ಖಾಯಂ ಮತ್ತು ಗುತ್ತಿಗೆ ತರಬೇತಿದಾರರ ಸಂಖ್ಯೆಯೆಷ್ಟು: (ಜಿಲ್ಲಾವಾರು ವಿವರ ನೀಡುವುದು) | ಇಲಾಖಾ ವತಿಯಿಂದ ಯಾವುದೇ ತರಬೇತಿದಾರರನ್ನು ನೇಮಿಸಿಕೊಂಡಿರುವುದಿಲ್ಲ. |
| ಇ) | ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಮತ್ತು ಸ್ಥಳೀಯರಿಗೆ ಉಚಿತವಾಗಿ ಯೋಗ ತರಬೇತಿಯನ್ನು ನೀಡಲು ಮುಂದೆ ಬರುವ ಯೋಗ ತರಬೇತಿದಾರರಿಗೆ ಉಚಿತವಾಗಿ ಶಾಲಾ ಕೊಠಡಿಗಳಲ್ಲಿ ಸ್ಥಳಾವಕಾಶ ನೀಡಲು ಅವಕಾಶವಿದೆಯೇ: | ಇಲ್ಲ |
| ಈ) | ಹಾಗಿದ್ದಲ್ಲಿ, ರಾಜ್ಯದಲ್ಲಿ ಎಷ್ಟು ಶಾಲೆಗಳಲ್ಲಿ ಉಚಿತ ಯೋಗ ತರಬೇತಿ ಅಭ್ಯಾಸ ನಡೆಯುತ್ತಿದೆ. ಹಾಗೂ ಶಾಲಾ ಕೊಠಡಿಗಳಲ್ಲಿ ಮುಂಜಾನೆ ಮತ್ತು ಸಂಜೆಯ ಹೊತ್ತಿನಲ್ಲಿ ಅವಕಾಶ ನೀಡಿದರೆ ಮಕ್ಕಳಿಗೆ ಮತ್ತು ಸ್ಥಳೀಯ ನಿವಾಸಿಗಳಿಗೆ ಅನುಕೂಲವಾಗುವುದಿಲ್ಲವೆ? | ಪ್ರಸ್ತುತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರು ತಮಗಿರುವ ದೈಹಿಕ ಶಿಕ್ಷಣ ಅವಧಿಯಲ್ಲಿ ಶಾಲಾ ಮಕ್ಕಳಿಗೆ ಯೋಗ ಶಿಕ್ಷಣವನ್ನು ಬೋಧಿಸುತ್ತಿದ್ದಾರೆ. |

**ಇಪಿ 36 ಪಿಎಂಎ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು